ಜೋಯಿಡಾದಲ್ಲಿ ಕುಡಿಯುವ ನೀರಿನ ಯೋಜನೆ.

2969-ಶ್ರೀ ಆರ್.ವಿ. ದೇಶಪಾಂಡೆ (ಹಳಿಯಾಳ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯ ಜೋಯಿಡಾಕ್ಕೆ ಕುಡಿಯುವ ನೀರಿನ ಯೋಜನೆಯನ್ನು ಜಿಲ್ಲಾ ಪರಿಷತ್ತು ಮಂಜೂರು ಮಾಡಿ ಕಾಮಗಾರಿಯ ಅನುಷ್ಟಾನದ ಸಲುವಾಗಿ ಭೂ ಸೇನಾ ನಿಗಮಕ್ಕೆ ವಹಿಸಿರುವುದು ನಿಜವಲ್ಲವೇ?

ಆ) ಹಾಗಿದ್ದಲ್ಲಿ ಎಂದಿನಿಂದ ಈ ಕಾಮಗಾರಿಯನ್ನು ಭೂ ಸೇನಾ ನಿಗಮಕ್ಕೆ ವಹಿಸಿಕೊಡಲಾಯಿತು?

ಇ) ಈ ಕಾಮಗಾರಿಗಳ ಸಲುವಾಗಿ ಜಿಲ್ಲಾ ಪರಿಷತ್ತು ಭೂ ಸೆನಾ ನಿಗಮಕ್ಕೆ 7 ಲಕ್ಷ ರೂಪಾಯಿಗಳನ್ನು ನೀಡಿರುವುದು ನಿಜವಲ್ಲವೇ?

ಈ) ಕಾಮಗಾರಿಗಳಿಗಾಗಿ ಹಣ ಪಡೆದು 2 ವರ್ಷಗಳಾಗಿದ್ದರೂ ಇದುವರೆವಿಗೂ ಕೆಲಸ ಪ್ರಾರಂಭಿಸದಿರಲು ಕಾರಣಗಳೇನು?

ಉ) ಭೂಸೇನಾ ನಿಗಮದಲ್ಲಿ ಈ ಕರ್ತವ್ಯ ಲೋಪಕ್ಕೆ ಕಾರಣರಾದವರ ಮೇಲೆ ಶಿಸ್ತಿನ ಕ್ರಮ ಕೈಗೊಳ್ಳುವುದಲ್ಲದೆ ಮೇಲ್ಕಂಡ ಕುಡಿಯುವ ನೀರಿನ ಯೋಜನೆಯ ಕಾಮಗಾರಿಯನ್ನು ಕೂಡಲೇ ಪ್ರಾರಂಭಿಸಲು ಕ್ರಮ ಸರ್ಕಾರ ಕೈಗೊಳ್ಳುವುದೇ?

ಶ್ರೀ ಕೆ.ಪೆಚ್. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಹೌದು.

ಆ) 5-4-1991

ಇ) ಇಲ್ಲ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಉ.ಕನ್ನಡ ಜಿಲ್ಲೆಯಲ್ಲಿ ಏತ ನೀರಾವರಿ ಯೋಜನೆ

2970 - ಶ್ರೀ ಆರ್.ವಿ.ದೇಶಪಾಂಡೆ (ಹಳಿಯಾಳ ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾರವಾರ ಜಿಲ್ಲೆಯಲ್ಲಿ ಹೊಸದಾಗಿ ಎಲ್ಲೆಲ್ಲಿ ಏತ ನೀರಾವರಿ ಯೋಜನೆಗಳನ್ನು ಪ್ರಾರಂಭಿಸಲಾಗುವುದು.

ಆ) ಈ ಯೋಜನೆಗಳನ್ನು ಎಂದಿನಿಂದ ಪ್ರಾರಂಭಿಸಲಾಗುವುದು.

ಇ) ಈ ಯೋಜನೆಗಳನ್ನು ಪ್ರಾರಂಭಿಸಿದಾಗ ಜಿಲ್ಲೆಯಲ್ಲಿ ಎಷ್ಟು ಎಕರೆ ಜಮೀನಿಗೆ ನೀರಾವರಿ ಸೌಲಭ್ಯ ದೊರೆಯುವುದು.

ಈ) ಇದಕ್ಕಾಗಿ ವೆಚ್ಚವಾಗಲಿರುವ ಹಣವೆಷ್ಟು. ಇಲ್ಲಿಯವರೆವಿಗೂ ಈ ಹೊಸ ಯೋಜನೆಗಳಿಗಾಗಿ ಬಿಡುಗಡೆ ಮಾಡಲಾಗಿರುವ ಹಣವೆಷ್ಟು?

ಶ್ರೀ ಕೆ.ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಸಚಿವರು)

ಅ) ಕಾರವಾರ ಜಿಲ್ಲೆಯಲ್ಲಿ ಹೊಸದಾಗಿ 35 ಏತ ನೀರಾವರಿ ಯೋಜನೆಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ. ವಿವರಗಳನ್ನು ಅನುಬಂಧ 'ಅ' ದಲ್ಲಿ ಕೊಡಲಾಗಿದೆ.